

ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಕರ್ನಾಟಕ ಸರ್ಕಾರ :: ಕಾರ್ಮಿಕ ಇಲಾಖೆ

**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು,

# "ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ"



ಶ್ರೀ. ಸಂತೋಷ್. ಎಸ್. ಲಾಡ್
ಮಾನ್ಯ ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು

## ಯೋಜನೆಯ ಉದ್ದೇಶ:

ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ವಿತರಿಸುವ ಕಾರ್ಮಿಕರು ಅರೆಕಾಲೀನ ವೃತ್ತಿ ನಿರ್ವಹಿಸುತ್ತಿದ್ದು, ಪ್ರತಿನಿತ್ಯ ಸಾರ್ವಜನಿಕರ ಮನೆ ಬಾಗಿಲಿಗೆ ಪತ್ರಿಕೆಗಳನ್ನು ವಿತರಿಸುತ್ತಾರೆ. ಸದರಿ ಕಾರ್ಮಿಕರಲ್ಲಿ ಬಹುತೇಕರು ದಿನಪತ್ರಿಕೆ ವಿತರಿಸಲು ದ್ವಿಚಕ್ರ ವಾಹನಗಳನ್ನು ಬಳಸುತ್ತಿದ್ದು, ಅಪಘಾತಕ್ಕೊಳಗಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಸದರಿ ಕಾರ್ಮಿಕರಿಗೆ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ವಿತರಿಸುವ ಮೂಲಕ ಸಾಮಾಜಿಕ ಭದ್ರತೆ ಒದಗಿಸುವುದು ಯೋಜನೆಯ ಉದ್ದೇಶವಾಗಿರುತ್ತದೆ.

## ಯೋಜನೆಯ ಸೌಲಭ್ಯ ಪಡೆಯಲು ಅರ್ಹತೆ:-

- ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು
- 16 ರಿಂದ 59 ವಯೋಮಾನದವರಾಗಿರಬೇಕು
- ಕೇಂದ್ರ ಸರ್ಕಾರದ ಇ-ಶ್ರಮ ಪೋರ್ಟಲ್‌ನಲ್ಲಿ " News Paper Boy" ಎಂಬ ವರ್ಗದಡಿ ನೋಂದಣಿಯಾಗಿರಬೇಕು
- ಆದಾಯ ತೆರಿಗೆ ಪಾವತಿದಾರರಾಗಿರಬಾರದು
- ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು

## ದೊರಕುವ ಸೌಲಭ್ಯಗಳು:-

- ಅಪಘಾತದಿಂದ ಮರಣ ಹೊಂದಿದಲ್ಲಿ ರೂ. 2.00 ಲಕ್ಷ
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ. 2.00 ಲಕ್ಷಗಳವರೆಗೆ (ಶೇಕಡಾವಾರು ದುರ್ಬಲತೆ ಆಧಾರದ ಮೇಲೆ)
- ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷಗಳವರೆಗೆ

## ಇತರೆ ಮಾಹಿತಿ:

- ಎಲ್ಲಾ ಪತ್ರಿಕಾ ವಿತರಕರು ಇಂದೇ, ಇ-ಶ್ರಮ ಪೋರ್ಟಲ್ www.eshram.gov.in ಅಲ್ಲಿ ಸ್ವಯಂ ಆಗಿ ಅಥವಾ ಹತ್ತಿರದ ಸೇವಾ ಕೇಂದ್ರಗಳಲ್ಲಿ ನೋಂದಾಯಿಸಿಕೊಳ್ಳುವ ಮೂಲಕ ಯೋಜನೆಯ ಪ್ರಯೋಜನವನ್ನು ಪಡೆಯಬಹುದಾಗಿದೆ
- ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಅರ್ಹ ಫಲಾನುಭವಿಗಳು, ಯೋಜನೆಯಡಿ ನಿಗದಿಪಡಿಸಿದ ನಮೂನೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಿ ಸೌಲಭ್ಯವನ್ನು ಪಡೆಯಬಹುದಾಗಿದೆ

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ**
ಕಾರ್ಮಿಕ ಸಹಾಯವಾಣಿ 155214(24*7), ಕಾರ್ಮಿಕ ಅಧಿಕಾರಿಗಳು ಹಾಗೂ
ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರ ಕಛೇರಿಗಳು, ಕಾರ್ಮಿಕ ಇಲಾಖೆ